ಸಿಂಧನೂರು ಕ್ಷೇತ್ರದಲ್ಲಿ ಸರ್ಕಾರಿ ಪ್ರೌಢಶಾಲೆ ಹಾಗೂ ಟಿ.ಸಿ.ಎಚ್ ತರಬೇತಿ ಕೇಂದ್ರಗಳ ಮಂಜೂರಾತಿ

2541 (2918) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) 2001-02 ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ಉದೇಶ ಸರ್ಕಾರಕ್ಕೆ ಇದೆಯಾ; ಹಾಗಿದ್ದಲ್ಲಿ ಸಿಂಧನೂರು ಕ್ಷೇತ್ರದ ರಾಗಲಪರ್ವಿ ಗ್ರಾಮ ಗಿಧ್ದಿಗಿ ಗ್ರಾಮ, ಬೂದಿಹಾಳ್ ಕ್ಯಾಂಪ್ ಈ ಗ್ರಾಮಗಳಿಗೆ ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡಲು ಇಲಾಖೆಯಿಂದ ಪ್ರಸ್ತಾವನೆ ಬಂದಿದೆಯೆ;

2) ರಾಜ್ಯದಲ್ಲಿ ಟಿ.ಸಿ.ಎಚ್ ಟಿ.ಸಿ.ಎಚ್ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೆ; ಇದ್ದಲ್ಲಿ ಪ್ರಸ್ತಾವನೆಗಳು ಯಾವ ಯಾವ ಜಿಲ್ಲೆಯಲ್ಲಿ ಬಂದಿವೆ; ಮಂಜೂರು ಮಾಡಲು ಹಾಕಿರುವ ಮಾನದಂಡವೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

1) ಹೌದು.

ಪ್ರಸ್ತಾವನೆ ಬಂದಿಲ್ಲ

2) ಇದೆ. ಬಹುತೇಕ ಜಿಲ್ಲೆಗಳಿಂದ ಪ್ರಸ್ತಾವನೆ ಬಂದಿದ್ದು ಶಿಕ್ಷಕ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸುವ ಬಗ್ಗೆ ಮಾರ್ಗ ಸೂಚಿಗಳನ್ನು ರೂಪಿಸಲಾಗುತ್ತಿದೆ.

ಹಾಸನ ವಿಧಾನಸಭಾ ಕ್ಷೇತ್ರದ ಶಾಲಾ ಕಟ್ಟಡಗಳ ದುರಸ್ತಿ

2542 (2921) ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

(ಅ) ಹಾಸನ ವಿಧಾನಸಭಾ ಕ್ಷೇತ್ರದ ಕಸಬಾ, ಕಟ್ಟಾಯ, ಶಾಂತಿಗ್ರಾಮ ಹೋಬಳಿಗಳಲ್ಲಿ ಕಳೆದ ವರ್ಷದ ಅತಿವೃಷ್ಟಿಯಿಂದ ಎಷ್ಟು ಶಾಲಾ ಕಟ್ಟಡಗಳು ಜಖಂ ಆಗಿವೆ; ವಿವರ ನೀಡುವುದು;

(ಆ) ಇಂತಹ ಕಟ್ಟಡಗಳಲ್ಲಿ ಮಕ್ಕಳು ವಿದ್ಯಾಭ್ಯಾಸವನ್ನು ಮಾಡುವುದು ಅಪಾಯಕಾರಿ ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?